ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪ್ರಶಸ್ತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 12/10/2019

# ಡಾ. ಕಮಲಾ ಹಂಪನ ಸೇರಿ ಮೂವರಿಗೆ ವಾಲ್ಮೀಕಿ ಪ್ರಶಸ್ತಿ

▪ ವಿಕ ಸುದ್ದಿಲೋಕ ಬೆಂಗಳೂರು

ಹಿರಿಯ ಸಾಹಿತಿ ಕಮಲಾ ಹಂಪನ ಸೇರಿದಂತೆ ಮೂವರನ್ನು ಪ್ರಸಕ್ತ ಸಾಲಿನ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ರಾಜ್ಯ ಸರಕಾರ ಆಯ್ಕೆ ಮಾಡಿದೆ.



ಸಾಹಿತ್ಯ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರುವ ಡಾ.ಕಮಲಾ ಹಂಪನ, ಸಾಮಾಜಿಕ ಕ್ಷೇತ್ರದಲ್ಲಿ ಗುರುತರ ಸೇವೆ ಸಲ್ಲಿಸುತ್ತಿರುವ ಓಬಳಪ್ಪ ಹಾಗೂ ಶೈಕ್ಷಣಿಕ ಕ್ಷೇತ್ರದಿಂದ ಡಾ.ಜಿ.ರಂಗಯ್ಯ ಅವರನ್ನು ವಾಲ್ಮೀಕಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು ನಗದು 5 ಲಕ್ಷ ರೂ ಹಾಗೂ 20 ಗ್ರಾಂ ಚಿನ್ನದ ಪದಕ ಒಳಗೊಂಡಿದೆ. ಇದೇ 13 ರಂದು ರಾಜ್ಯಮಟ್ಟದ ವಾಲ್ಮೀಕಿ ಜಯಂತಿ ಕಾರ್ಯಕ್ರಮವು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿದ್ದು ಅಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಮಾಜ ಕಲ್ಯಾಣ ಹಾಗೂ ಲೋಕೋಪಯೋಗಿ ಖಾತೆ ಹೊಂದಿರುವ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ ತಿಳಿಸಿದ್ದಾರೆ.

ವಿಶ್ರಾಂತ ಕುಲಪತಿಗಳಾದ ಡಾ.ನಿರಂಜನ್ ಎಸ್.ಆರ್. ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯು ಈ ಮೂವರು ಗಣ್ಯರನ್ನು ಮಹರ್ಷಿ ಪ್ರಶಸ್ತಿಗೆ ಆಯ್ಕೆ ಮಾಡಿದೆ. ಸಿಎಂ ಯಡಿಯೂರಪ್ಪ ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಭಾಗವಹಿಸುವರು.

**ಡಾ.ಕಮಲಾ ಹಂಪನ**

ರಾಜ್ಯ ಸಾಹಿತ್ಯ ಅಕಾಡೆಮಿ, ಕಿತ್ತೂರು ರಾಣಿ ಚೆನ್ನಮ್ಮ ಸೇರಿದಂತೆ ಹಲವು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

**ಓಬಳಪ್ಪ**

ನಿವೃತ್ತ ಕೃಷಿ ಅಧಿಕಾರಿ, ಮಹರ್ಷಿ ವಾಲ್ಮೀಕಿ ಗುರುಪೀಠದ ಆಡಳಿತಾಧಿಕಾರಿಯಾಗಿ, ಹರಿಹರದ ವಾಲ್ಮೀಕಿ ಹಾಸ್ಟೆಲ್ ಸಮಿತಿ ಅಧ್ಯಕ್ಷರಾಗಿ ಸೇವೆ.

**ಡಾ.ಜಿ.ರಂಗಯ್ಯ**

ನರರೋಗ ತಜ್ಞ, ನ್ಯೂಯಾರ್ಕ್ ಸಿಟಿ ಮೆಡಿಕಲ್ ಸೊಸೈಟಿ ಅಧ್ಯಕ್ಷರಾಗಿ ಅಮೆರಿಕದಲ್ಲಿರುವ ಇಂಡಿಯನ್ ನ್ಯೂರಾಲಜಿಸ್ಟ್ ಸಂಸ್ಥೆಯ ಕಾರ್ಯದರ್ಶಿ, ಇಂಡಿಯನ್ ನ್ಯೂರಾಜಲಿಸ್ಟ್ ನ್ಯಾಷನಲ್ ಅಸೋಸಿಯೇಷನ್ ಅಧ್ಯಕ್ಷರಾಗಿ ಸೇವೆ.

7